ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 126 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | 19-12-2022 |
| 4) | ಉತ್ತರಿಸುವವರು | ಮಾನ್ಯ ಉನ್ನತ ಶಿಕ್ಷಣ, ಐಟಿ-ಬಿಟಿ ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಪ್ರಶ್ನೆ | ಉತ್ತರ |
|---|---|
| (ಅ) ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯು ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳಾವುವು; ಇಲ್ಲಿಯವರೆಗೆ ಎಷ್ಟು ಜನ ಫಲಾನುಭವಿಗಳಿಗೆ ವಿವಿಧ ರೀತಿಯ ಯೋಜನಾ ಸೌಲಭ್ಯ ಶಿಕ್ಷಣ ನೀಡಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು) | **ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ (ಕೆ.ಎಸ್.ಡಿ.ಸಿ)** |

ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮವು ಕೇಂದ್ರ ಸರ್ಕಾರದ ಪ್ರಧಾನಮಂತ್ರಿಗಳ ಕೌಶಲ್ಯ ವಿಕಾಸ ಯೋಜನೆಯನ್ನು ಹಾಗೂ ರಾಜ್ಯ ಸರ್ಕಾರದ ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯನ್ನು ಜಾರಿಗೆ ತಂದಿದ್ದು, ರಾಜ್ಯದ ಯುವ ಜನತೆಗೆ ಅಲ್ಪಾವಧಿ ಕೌಶಲ್ಯಾಧಾರಿತ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಉದ್ಯೋಗ ಕಲ್ಪಿಸುವ ಯೋಜನೆಗಳನ್ನು ಹಮ್ಮಿಕೊಂಡು ಉದ್ಯೋಗ ಕಲ್ಪಿಸುವ ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಅದರಂತೆ ಮೇಲ್ಕಂಡ ಯೋಜನೆಗಳಡಿ ನಿಗಧಿಪಡಿಸಿರುವ ಕೇಂದ್ರ ಸರ್ಕಾರದ ಹಾಗೂ ರಾಜ್ಯ ಸರ್ಕಾರದ ಮಾನದಂಡದನ್ವಯ ನೋಂದಣಿಗೊಂಡ ಸರ್ಕಾರಿ/ಸರ್ಕಾರೇತರ ಸಂಘ ಸಂಸ್ಥೆಗಳ ಮೂಲಕ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿರುತ್ತದೆ.

ಪ್ರಧಾನಮಂತ್ರಿಗಳ ಕೌಶಲ್ಯ ವಿಕಾಸ ಯೋಜನೆಯಡಿ ಉಚಿತ ಕೌಶಲ್ಯಾಧಾರಿತ ತರಬೇತಿ ಪಡೆದ ಫಲಾನುಭವಿಗಳ ವಿವರ:

| ಕ್ರಸಂ | ಆರ್ಥಿಕ ವರ್ಷ | ಫಲಾನುಭವಿಗಳ ಸಂಖ್ಯೆ |
|---|---|---|
| 01 | 2017-2020 | 14611 |
| 02 | 2020-21 | 5672 |
| 03 | 2021-22 | 17061 |
| | ಒಟ್ಟು | **37344** |

ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯಡಿ ಉಚಿತ ಕೌಶಲ್ಯಾಧಾರಿತ ತರಬೇತಿ ಪಡೆದ ಫಲಾನುಭವಿಗಳ ವಿವರ:

| ಕ್ರಸಂ | ಆರ್ಥಿಕ ವರ್ಷ | ಫಲಾನುಭವಿಗಳ ಸಂಖ್ಯೆ |
|---|---|---|
| 01 | 2018-19 | 4815 |
| 02 | 2019-20 | 13856 |
| 03 | 2020-21 | 25077 |
| 04 | 2021-22 | 43397 |
| 05 | 2022-23 (ನವೆಂಬರ್-2022ರ ಅಂತ್ಯಕ್ಕೆ) | 21026 |
| | ಒಟ್ಟು | **108171** |

**ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ (ಡೇ-ನಲ್ಮ್)**

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ರಾಷ್ಟ್ರೀಯ ಜೀವನೋಪಾಯ ಅಭಿಯಾನದಡಿ ಡೇ-ಎನ್‌ಯುಎಲ್‌ಎಂ ಅಭಿಯಾನವು ಕಾರ್ಯನಿರ್ವಹಿಸುತ್ತಿದ್ದು, ಈ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತದೆ.

**1) ಸಾಮಾಜಿಕ ಕ್ರೋಢೀಕರಣ ಮತ್ತು ಸಾಂಸ್ಥಿಕ ಅಭಿವೃದ್ಧಿ**
ಸದರಿ ಉಪಘಟಕದಡಿ ಮಹಿಳಾ ಸ್ವ-ಸಹಾಯ ಸಂಘ, ಪ್ರದೇಶ ಮಟ್ಟದ ಒಕ್ಕೂಟಗಳ ರಚನೆ ಹಾಗೂ ಸ್ವ-ಸಹಾಯ ಸಂಘಗಳಿಗೆ ರೂ.10,000/- ಮತ್ತು ಒಕ್ಕೂಟಗಳಿಗೆ ರೂ.50,000/- ಆವರ್ತಕ ನಿಧಿ ವಿತರಣೆ ಹಾಗೂ ಸಂಘ ಮತ್ತು ಒಕ್ಕೂಟದ ಸದಸ್ಯರುಗಳಿಗೆ ವಿವಿಧ ಸಾಮರ್ಥ್ಯ ಅಭಿವೃದ್ಧಿ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು.

**2) ಸ್ವಯಂ ಉದ್ಯೋಗ ಕಾರ್ಯಕ್ರಮ:**

ಸದರಿ ಉಪಘಟಕದಡಿ ವೈಯಕ್ತಿಕ ಕಿರು ಉದ್ದಿಮೆ, ಗುಂಪು ಕಿರು ಉದ್ದಿಮೆ ಹಾಗೂ ಎಸ್‌ಹೆಚ್‌ಜಿ ಬ್ಯಾಂಕ್ ಕ್ರೆಡಿಟ್ ಲಿಂಕೇಜ್‌ಗೆ ಸಂಬಂಧಿಸಿದಂತೆ ಕ್ರಮವಾಗಿ ಬ್ಯಾಂಕಿನಿಂದ ರೂ.2.00ಲಕ್ಷ, ರೂ.10.00 ಲಕ್ಷ ಮತ್ತು ರೂ.1.00 ಲಕ್ಷವರೆಗೆ ಬ್ಯಾಂಕಿನಿಂದ ಸಾಲ ಸೌಲಭ್ಯವನ್ನು ಕಲ್ಪಿಸಲಾಗುವುದು. ಶೇ.7 ಕ್ಕಿಂತ ಮೇಲ್ಪಟ್ಟ ಬಡ್ಡಿ ಸಹಾಯಧನವನ್ನು ಯೋಜನೆಯಿಂದ ಭರಿಸಿ ಪಾವತಿಸಲಾಗುವುದು ಹಾಗೂ ಸ್ವ-ಸಹಾಯ ಸಂಘಗಳು ನಿಯಮಿತವಾಗಿ ಸಾಲವನ್ನು ಮರು ಪಾವತಿಸಿದರೆ ಶೇ.3 ರಷ್ಟು ಹೆಚ್ಚುವರಿ ಬಡ್ಡಿ ಸಹಾಯಧನ ನೀಡಲಾಗುವುದು ಹಾಗೂ ಉದ್ಯಮಶೀಲತಾ ತರಬೇತಿಯನ್ನು ನೀಡಲಾಗುವುದು.

**3) ಕೌಶಲ್ಯ ತರಬೇತಿ ಮೂಲಕ ಉದ್ಯೋಗ ಮತ್ತು ಸ್ಥಳ ನಿಯುಕ್ತಿ:**
ಸದರಿ ಉಪಘಟಕದಡಿ ನಗರದ ನಿರುದ್ಯೋಗ ಯುವಕ/ಯುವತಿಯರಿಗೆ ವಿವಿಧ ಉದ್ಯೋಗಾಧಾರಿತ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮಗಳನ್ನು ನೀಡಿ, ಪ್ರಮಾಣೀಕರಣ ಮತ್ತು ಮೌಲ್ಯಮಾಪನವನ್ನು ಕೈಗೊಂಡು, ಕೇಂದ್ರ ಸರ್ಕಾರದ ಪ್ರಮಾಣ ಪತ್ರವನ್ನು ನೀಡಿ, ತರಬೇತಿಯನ್ನು ಪಡೆದುಕೊಂಡ ಶೇ.70 ರಷ್ಟು ಅಭ್ಯರ್ಥಿಗಳಿಗೆ ಸ್ವಯಂ ಉದ್ಯೋಗ ಅಥವಾ ವೇತನಾಧಾರಿತ ಉದ್ಯೋಗವನ್ನು ಕಲ್ಪಿಸಲಾಗುವುದು.

**4)ನಗರದ ವಸತಿ ರಹಿತರಿಗೆ ಆಶ್ರಯ:**
ಸದರಿ ಉಪಘಟಕದಡಿ ನಗರದ ವಸತಿ ರಹಿತರನ್ನು ರ್‍ಯಾಪಿಡ್ ಸಮೀಕ್ಷೆಯ ಮೂಲಕ ಗುರುತಿಸಿ, ಆಶ್ರಯವನ್ನು ಕಲ್ಪಿಸಲಾಗುವುದು.

**5)ನಗರದ ಬೀದಿ ವ್ಯಾಪಾರಸ್ಥರಿಗೆ ಬೆಂಬಲ:**
ಸದರಿ ಉಪಘಟಕದಡಿ ನಗರದ ಬೀದಿ ವ್ಯಾಪಾರಸ್ಥರನ್ನು ಗುರುತಿಸಿ, ಗುರುತಿನ ಚೀಟಿ ಮತ್ತು ಮಾರಾಟ ಪ್ರಮಾಣ ಪತ್ರವನ್ನು ವಿತರಿಸಲಾಗುವುದು.

**6)ಸಾಮರ್ಥ್ಯ ಅಭಿವೃದ್ಧಿ ಮತ್ತು ತರಬೇತಿ:**
ಸದರಿ ಉಪಘಟಕದಡಿ ಅಭಿಯಾನವನ್ನು ಅನುಷ್ಠಾನಗೊಳಿಸಲು ತೊಡಗಿಸಿಕೊಂಡಿರುವ ಅಧಿಕಾರಿ/ಸಿಬ್ಬಂದಿಗಳಿಗೆ ವಿವಿಧ ಸಾಮರ್ಥ್ಯ ಅಭಿವೃದ್ಧಿ ತರಬೇತಿ ಕಾರ್ಯಕ್ರಮಗಳನ್ನು ನೀಡಲಾಗುತ್ತಿದೆ.

1,41,160 ನಗರದ ಯುವಕ/ಯುವತಿಯರಿಗೆ ಡೇ-ಎನ್‌ಯುಎಲ್‌ಎಂ ಅಭಿಯಾನದಡಿ ವಿವಿಧ ರೀತಿಯ ಉದ್ಯೋಗ ಆಧಾರಿತ ಕೌಶಲ್ಯ ತರಬೇತಿಯನ್ನು ನೀಡಲಾಗಿರುತ್ತದೆ.

**ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (ಎನ್.ಆರ್.ಎಲ್.ಎಂ)**
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆಯ ಮೂಲಕ ಪ್ರಮುಖವಾಗಿ ಗ್ರಾಮೀಣ ಮಹಿಳೆಯರನ್ನು ಸ್ವಸಹಾಯ ಗುಂಪುಗಳಾಗಿ ಸಂಘಟಿಸುವ ಮೂಲಕ ಅವರ ಸಾಮರ್ಥ್ಯ ಅಭಿವೃದ್ಧಿಗೊಳಿಸಿ ಜೀವನೋಪಾಯ ಉದ್ಯೋಗವನ್ನು ಕಲ್ಪಿಸುವ ಉದ್ದೇಶದಿಂದ ಈ ಕೆಳಗಿನ ಕಾರ್ಯಕ್ರಮಗಳಡಿ ವಿವಿಧ ರೀತಿಯ ಯೋಜನಾ ಸೌಲಭ್ಯ ಶಿಕ್ಷಣ ನೀಡಲಾಗುತ್ತಿದೆ.

**ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ:-**
ಕಾರ್ಯಕ್ರಮವನ್ನು ರಾಜ್ಯದ 31 ಜಿಲ್ಲೆಯ 226 ತಾಲ್ಲೂಕುಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ರಾಜ್ಯದಲ್ಲಿನ 2948498 ಮಹಿಳೆಯರನ್ನು 245185

ಗುಂಪುಗಳಡಿ ಸಂಘಟಿಸಲಾಗಿದೆ. ಸಮುದಾಯ ಆಧಾರಿತ ಸಂಸ್ಥೆಗಳ ಬಲವರ್ಧನೆ ಪರಿಕಲ್ಪನೆಯಡಿ 5923 ಗ್ರಾಮ ಪಂಚಾಯತಿ ಮಟ್ಟದ ಒಕ್ಕೂಟಗಳನ್ನು ರಚನೆ ಮಾಡುವ ಮೂಲಕ ಗ್ರಾಮೀಣ ಸ್ವಸಹಾಯ ಗುಂಪಿನ ಮಹಿಳೆಯರಿಗೆ ಒಂದಕ್ಕಿಂತ ಹೆಚ್ಚು ಸ್ವ-ಉದ್ಯೋಗಗಳನ್ನು ಕೈಗೊಳ್ಳುವಲ್ಲಿ ಸಮುದಾಯ ಬಂಡವಾಳ ನಿಧಿ, ಸುತ್ತುನಿಧಿ, ಬ್ಯಾಂಕ್ ಸಾಲ ಸೌಲಭ್ಯ ಮತ್ತು ಸರ್ಕಾರದ ವಿವಿಧ ಇಲಾಖೆಗಳ ಸೌಲಭ್ಯಗಳನ್ನು ಅರ್ಹತೆಯ ಅನುಸಾರ ಒದಗಿಸಲಾಗುತ್ತಿದೆ.

**ರಾಷ್ಟ್ರೀಯ ಗ್ರಾಮೀಣ ಆರ್ಥಿಕ ಪರಿವರ್ತನೆ ಯೋಜನೆ:-**
ಎನ್‌ಆರ್‌ಇಟಿಪಿ ರಾಜ್ಯದ 3 ಜಿಲ್ಲೆಗಳ ಆಯ್ದ 15 ತಾಲ್ಲೂಕುಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, 13 ಒನ್‌ಸ್ಟಾಪ್ ಸೆಂಟರ್‌ಗಳ ಮೂಲಕ ಪ್ರಮುಖವಾಗಿ ಮಹಿಳೆಯರನ್ನು ಉದ್ದಿಮೆದಾರರನ್ನಾಗಿ ಬೆಳೆಸುವಲ್ಲಿ ಸೂಕ್ತ ತರಬೇತಿ, ಕೌಶಲ್ಯಗಳ ತಾಂತ್ರಿಕ ಬೆಂಬಲ ಮತ್ತು ಮಾರುಕಟ್ಟೆ ವ್ಯವಸ್ಥೆ ಮತ್ತು ಸಮುದಾಯ ಉದ್ಯಮ ನಿಧಿಗಳನ್ನು ಅರ್ಹತೆಯ ಅನುಸಾರ ಕಲ್ಪಿಸಲಾಗುತ್ತಿದೆ.

**ದೀನ್ ದಯಾಳ ಉಪಾದ್ಯಾಯ ಗ್ರಾಮೀಣ ಕೌಶಲ್ಯ ಯೊಜನೆಯ:-**
ಡಿಡಿಯುಜಿಕೆವೈ ರಾಜ್ಯದಲ್ಲಿ ಈ ಕಾರ್ಯಕ್ರಮವನ್ನು 13 ಯೋಜನಾ ಅನುಷ್ಠಾನ ಸಂಸ್ಥೆಗಳ ಮೂಲಕ 17 ತರಬೇತಿ ಕೇಂದ್ರಗಳು ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿವೆ. ಗ್ರಾಮೀಣ ಯುವಕ ಯುವತಿಯರಿಗೆ ವೇತನ ಆಧಾರಿತ ವಿವಿಧ ಕೌಶಲ್ಯ ತರಬೇತಿಗಳನ್ನು ಒದಗಿಸಿ ಉದ್ಯೋಗ ಹೊಂದಲು ಬೆಂಬಲಿಸಲಾಗುತ್ತಿದ್ದು, ರಾಜ್ಯದಲ್ಲಿ 50127 ಅಭ್ಯರ್ಥಿಗಳಿಗೆ ವಿವಿಧ ತರಬೇತಿಗಳನ್ನು ಒದಗಿಸಿ 25840 ಅಭ್ಯರ್ಥಿಗಳಿಗೆ ಉದ್ಯೋಗವಕಾಶ ಕಲ್ಪಿಸಲಾಗಿದೆ.

**ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ:-**
ಕಾರ್ಯಕ್ರಮದಡಿ ರಾಜ್ಯದ 31 ತರಬೇತಿ ಸಂಸ್ಥೆಗಳಡಿ ಗ್ರಾಮೀಣ ಯುವಕ ಯುವತಿಯರಿಗೆ ಸ್ವ ಉದ್ಯೋಗ ಆಧಾರಿತ ತರಬೇತಿಗಳನ್ನು ನೀಡಿ ಸ್ವಉದ್ಯೋಗ ಒದಗಿಸಲಾಗುತ್ತಿದೆ. ಅಭ್ಯರ್ಥಿಗಳ ಆಯ್ಕೆಯಾನುಸಾರ ಉಚಿತ ತರಬೇತಿ ನೀಡಲಾಗಿದ್ದು, ಒಟ್ಟು 347646 ಅಭ್ಯರ್ಥಿಗಳಿಗೆ 290806 ಬಡತನ ರೇಖೆಯ ಕುಟುಂಬಗಳನ್ನು ಒಳಗೊಂಡಿರುತ್ತದೆ.

**ಸಿಡಾಕ್**

ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್)ದಿಂದ ಈ ಕೆಳಕಂಡ ಉದ್ಯಮಶೀಲತಾಭಿವೃದ್ಧಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

1. ಉದ್ಯಮಶೀಲತಾ ಪ್ರೇರಣಾ ಶಿಬಿರ
2. ಮೂರು ದಿನಗಳ ಉದ್ಯಮಶೀಲತಾ ತಿಳುವಳಿಕಾ ಕಾರ್ಯಕ್ರಮ (ವಿಶೇಷವಾಗಿ ವಿದ್ಯಾರ್ಥಿಗಳಿಗೆ)
3. ಹತ್ತು ದಿನಗಳ ಉದ್ಯಮಶೀಲತಾಭಿವೃದ್ಧಿ ಕಾರ್ಯಕ್ರಮ
4. ಮೂವತ್ತು ದಿನಗಳ ವಲಯಾಧಾರಿತ ಉದ್ಯಮಶೀಲತಾಭಿವೃದ್ಧಿ ಕಾರ್ಯಕ್ರಮ.

ಕಳೆದ ಮೂರು ವರ್ಷಗಳಲ್ಲಿ ತರಬೇತಿ ಪಡೆದ ಅಭ್ಯರ್ಥಿಗಳ ಮಾಹಿತಿಯು ಈ ಕೆಳಗಿನಂತಿದೆ.

| ವರ್ಷ | ತರಬೇತಿ ಪಡೆದ ಅಭ್ಯರ್ಥಿಗಳ ಸಂಖ್ಯೆ |
|---|---|
| **2019-20** | **23356** |
| **2020-21** | **2308** |
| **2021-22** | **9773** |

(ಆ) ಸದರಿ ಯೋಜನೆಗಳ ಅನುಷ್ಠಾನಕ್ಕಾಗಿ ಮಂಜೂರಾದ ಮತ್ತು ವೆಚ್ಚವಾದ ಅನುದಾನವೆಷ್ಟು; (ಕಳೆದ ಮೂರು ವರ್ಷಗಳ ವಿವರ ನೀಡುವುದು)

**ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ (ಕೆ.ಎಸ್.ಡಿ.ಸಿ)**

ಪ್ರಧಾನಮಂತ್ರಿಗಳ ಕೌಶಲ್ಯ ವಿಕಾಸ ಯೋಜನೆಯಡಿ ಮಂಜೂರಾದ ಮತ್ತು ಬಿಡುಗಡೆಗೊಳಿಸಲಾದ ಅನುದಾನದ ವಿವರ:

(ರೂ.ಲಕ್ಷಗಳಲ್ಲಿ)

| ಕ್ರಸಂ | ಆರ್ಥಿಕ ವರ್ಷ | ಮಂಜೂರಾದ ಅನುದಾನದ ವಿವರ | ಬಿಡುಗಡೆಗೊಳಿಸಲಾದ ಅನುದಾನದ ವಿವರ |
|---|---|---|---|
| 01 | 2019-20 | 800 | 785.11 |

| | | | |
|---|---|---|---|
| 02 | 2020-21 | 783.75 | 783.72 |
| 03 | 2021-22 | 827.89 | 827.89 |
| **ಒಟ್ಟು** | | **2411.64** | **2396.72** |

ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯಡಿ ಮಂಜೂರಾದ ಮತ್ತು ಬಿಡುಗಡೆಗೊಳಿಸಲಾದ ಅನುದಾನದ ವಿವರ:

(ರೂ.ಲಕ್ಷಗಳಲ್ಲಿ)

| ಕ್ರ.ಸಂ | ಆರ್ಥಿಕ ವರ್ಷ | ಮಂಜೂರಾದ ಅನುದಾನದ ವಿವರ | ಬಿಡುಗಡೆಗೊಳಿಸಲಾದ ಅನುದಾನದ ವಿವರ |
|---|---|---|---|
| 01 | 2019-20 | 8232.32 | 6664.12 |
| 02 | 2020-21 | 7614.54 | 7427.18 |
| 03 | 2021-22 | 8514.55 | 8281.83 |
| **ಒಟ್ಟು** | | **24361.41** | **22373.13** |

ಮೇಲ್ಕಂಡ ಅನುದಾನದಲ್ಲಿ ಆಡಳಿತಾತ್ಮಕ ವೆಚ್ಚವನ್ನು ಒಳಗೊಂಡು ತರಬೇತಿ ಯೋಜನೆಗಳಿಗೆ ಅನುದಾನವನ್ನು ಬಿಡುಗಡೆಗೊಳಿಸಲಾಗಿರುತ್ತದೆ.

**ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ (ಡೇ-ನಲ್ಮ್)**

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ರಾಷ್ಟ್ರೀಯ ಜೀವನೋಪಾಯ ಅಭಿಯಾನದಡಿ ಡೇ-ಎನ್‌ಯುಎಲ್‌ಎಂ ಅಭಿಯಾನಕ್ಕೆ ಕಳೆದ 3 ವರ್ಷಗಳಲ್ಲಿ ಮಂಜೂರಾದ ಮತ್ತು ವೆಚ್ಚ ಮಾಡಲಾದ ಅನುದಾನದ ವಿವರಗಳು ಈ ಕೆಳಕಂಡಂತೆ ಇರುತ್ತದೆ.

ರೂ. ಲಕ್ಷಗಳಲ್ಲಿ

| ಕ್ರ ಸಂ | ವರ್ಷ | ಮಂಜೂರಾದ ಅನುದಾನ | ವೆಚ್ಚಮಾಡಲಾದ ಅನುದಾನ |
|---|---|---|---|
| 1 | 2019-20 | 2497.08 | 3345.21 |
| 2 | 2020-21 | 5512.20 | 2243.10 |
| 3 | 2021-22 | 00 | 4585.98 |

**ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (ಎನ್.ಆರ್.ಎಲ್.ಎಂ)**

ಯೋಜನೆಗಳ ಅನುಷ್ಠಾನಕ್ಕೆ ಮಂಜೂರಾದ ಮತ್ತು ವೆಚ್ಚದ ಅನುದಾನ ವಿವರಗಳನ್ನು **ಅನುಬಂಧ-1**ರಲ್ಲಿ ಲಗತ್ತಿಸಿದೆ.

**ಸಿಡಾಕ್**

ಕಳೆದ ಮೂರು ವರ್ಷಗಳಲ್ಲಿ ಮಂಜೂರಾದ ಮತ್ತು ವೆಚ್ಚ ಮಾಡಲಾದ ಅನುದಾನ ವಿವರ ಈ ಕೆಳಗಿನಂತಿದೆ.

| ವರ್ಷ | ಮಂಜೂರಾದ ಅನುದಾನ (ರೂ.ಲಕ್ಷಗಳಲ್ಲಿ) | ವೆಚ್ಚ ಮಾಡಲಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|
| **2019-20** | **80.26** | **80.26** |
| **2020-21** | **170.00** | **170.00** |
| **2021-22** | **99.55** | **99.55** |

(ಇ) ನಿರುದ್ಯೋಗಿಗಳ ಕನಿಷ್ಠ ಶಿಕ್ಷಣವನ್ನು ಪಡೆದವರು ವಿಶೇಷತ ಕೌಶಲ್ಯಾಭಿವೃದ್ಧಿ ಶಿಕ್ಷಣ ತರಬೇತಿಯನ್ನು ಪಡೆಯಲಿಚ್ಛಿಸುವ ಆಸಕ್ತರಿಗೆ ಮತ್ತು ಕೌಶಲ್ಯವನ್ನು ಪಡೆದು ಜೀವನ ನಡೆಸಲು ಶಕ್ತರಾಗಿಸುವಲ್ಲಿ ಸರ್ಕಾರದ ಕ್ರಿಯಾ ಯೋಜನೆಗಳಾವುವು?

**ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ (ಕೆ.ಎಸ್.ಡಿ.ಸಿ)**

ಈಗಾಗಲೇ ಕರ್ನಾಟಕ ರಾಜ್ಯದಾದ್ಯಂತ ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆ ಹಾಗೂ ಪ್ರಧಾನ ಮಂತ್ರಿಗಳ ಕೌಶಲ್ಯ ವಿಕಾಸ ಯೋಜನೆಗಳ ಮೂಲಕ ಉಚಿತ ಕೌಶಲ್ಯಾಧಾರಿತ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ರಾಜ್ಯದ ಯುವ ಜನತೆಗೆ ಅದರಲ್ಲಿಯೂ ನಿರುದ್ಯೋಗಿಗಳ ಕನಿಷ್ಠ ಶಿಕ್ಷಣವನ್ನು ಪಡೆದವರು ವಿಶೇಷತಃ ಕೌಶಲ್ಯಾಭಿವೃದ್ಧಿ ಶಿಕ್ಷಣ ತರಬೇತಿಯನ್ನು ಪಡೆಯಲಿಚ್ಛಿಸುವ ಆಸಕ್ತರಿಗೆ ಕೌಶಲ್ಯತೆಯೊಂದಿಗೆ ಉದ್ಯಮಶೀಲರನ್ನಾಗಿಸುವ ಮಹತ್ವಾಕಾಂಕ್ಷೆಯನ್ನು ಹೊಂದಿದ್ದು, ತರಬೇತುದಾರ ಸಂಸ್ಥೆಗಳಲ್ಲಿ ತರಬೇತಿ ಪಡೆಯುವ ಅಭ್ಯರ್ಥಿಗಳ ಪೈಕಿ ಶೇ 70ರಷ್ಟು ಅಭ್ಯರ್ಥಿಗಳಿಗೆ ಉದ್ಯೋಗಾವಕಾಶ ಕಲ್ಪಿಸುವ ಷರತ್ತನ್ನು

| | |
|---|---|
| | ವಿಧಿಸಲಾಗಿದೆ ಹಾಗೂ ಪ್ರಾದೇಶಿಕ, ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಉದ್ಯೋಗ ಮೇಳಗಳ ಮೂಲಕ ಮತ್ತು ವರ್ಚುಯಲ್ ಉದ್ಯೋಗ ಮೇಳಗಳ ಮೂಲಕ ರಾಜ್ಯದ ಯುವ ಜನತೆಗೆ ಉದ್ಯೋಗಾವಕಾಶ ಒದಗಿಸುವ ಕ್ರಮವನ್ನು ಕೈಗೊಂಡಿದೆ.<br><br>**ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ (ಡೇ-ನಲ್ಮ್)**<br>ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ರಾಷ್ಟ್ರೀಯ ಜೀವನೋಪಾಯ ಅಭಿಯಾನದಡಿ ಡೇ-ಎನ್‌ಯುಎಲ್‌ಎಂ ಅಭಿಯಾನವು ಕಾರ್ಯನಿರ್ವಹಿಸುತ್ತಿದ್ದು ಆಸಕ್ತರಿಗೆ ಕೌಶಲ್ಯವನ್ನು ನೀಡುವ ಮೂಲಕ ಶಕ್ತರಾಗಿಸುವಲ್ಲಿ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br><br>**1) ಕೌಶಲ್ಯ ತರಬೇತಿ ಮೂಲಕ ಉದ್ಯೋಗ ಮತ್ತು ಸ್ಥಳ ನಿಯುಕ್ತಿ.**<br>• ಸದರಿ ಉಪಘಟಕದಡಿ ನಗರ ನಿರುದ್ಯೋಗ ಯುವಕ/ಯುವತಿಯರಿಗೆ ವಿವಿಧ ಉದ್ಯೋಗಾಧಾರಿತ ಕೌಶಲ್ಯ ಅಭಿವೃದ್ಧಿ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು.<br>• ತರಬೇತಿ ಕಾರ್ಯಕ್ರಮ ಮುಕ್ತಾಯಗೊಂಡ ನಂತರ ಶೇ 70 ರಷ್ಟು ಅಭ್ಯರ್ಥಿಗಳಿಗೆ ಸ್ವಯಂ ಉದ್ಯೋಗ ಅಥವಾ ವೇತನ ಆಧಾರಿತ ಉದ್ಯೋಗವನ್ನು ಕಲ್ಪಿಸಲಾಗುವುದು.<br><br>**2) ಸ್ವಯಂ ಉದ್ಯೋಗ ಕಾರ್ಯಕ್ರಮ:**<br>ಸದರಿ ಉಪಘಟಕದಡಿ ವೈಯಕ್ತಿಕ ಕಿರು ಉದ್ದಿಮೆ, ಗುಂಪು ಕಿರು ಉದ್ದಿಮೆ ಹಾಗೂ ಎಸ್‌ಹೆಚ್‌ಜಿ ಬ್ಯಾಂಕ್ ಕ್ರೆಡಿಟ್ ಲಿಂಕೇಜ್‌ಗೆ ಸಂಬಂಧಿಸಿದಂತೆ ಕ್ರಮವಾಗಿ ಬ್ಯಾಂಕಿನಿಂದ ರೂ.2.00 ಲಕ್ಷ, ರೂ.10.00 ಲಕ್ಷ ಮತ್ತು ರೂ.1.00 ಲಕ್ಷವರೆಗೆ ಬ್ಯಾಂಕಿನಿಂದ ಸಾಲ ಸೌಲಭ್ಯವನ್ನು ಕಲ್ಪಿಸಲಾಗುವುದು. ಶೇ.7 ಕ್ಕಿಂತ ಮೇಲ್ಪಟ್ಟ ಬಡ್ಡಿ ಸಹಾಯಧನವನ್ನು ಯೋಜನೆಯಿಂದ ಭರಿಸಿ ಪಾವತಿಸಲಾಗುವುದು ಹಾಗೂ ಸ್ವ-ಸಹಾಯ ಸಂಘಗಳು ನಿಯಮಿತವಾಗಿ ಸಾಲವನ್ನು ಮರು ಪಾವತಿಸಿದರೆ ಶೇ.3 ರಷ್ಟು ಹೆಚ್ಚುವರಿ ಬಡ್ಡಿ ಸಹಾಯಧನ ನೀಡಲಾಗುವುದು ಹಾಗೂ ಉದ್ಯಮಶೀಲತಾ ತರಬೇತಿಯನ್ನು ನೀಡಲಾಗುವುದು.<br><br>**ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (ಎನ್.ಆರ್.ಎಲ್.ಎಂ)**<br>• ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್ ಸಂಸ್ಥೆಯಡಿ ನಡೆಯುತ್ತಿರುವ ಕೌಶಲ್ಯಾಧಾರಿತ ತರಬೇತಿಗಳು ಬೇಡಿಕೆಯಾಧಾರಿತವಾಗಿದ್ದು, ಕನಿಷ್ಠ ಶಿಕ್ಷಣವನ್ನು ಪಡೆದಿರುವ ಗ್ರಾಮೀಣ ಸ್ವಸಹಾಯ ಗುಂಪಿನ ನಿರುದ್ಯೋಗಿ ಮಹಿಳೆಯರಿಗೆ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಯೋಜನೆಯಡಿ ಒಂದಕ್ಕಿಂತ ಹೆಚ್ಚು ಜೀವನೋಪಾಯ ಚಟುವಟಿಕೆ ತೊಡಗಿಸಿಕೊಳ್ಳುವುದಕ್ಕೆ ಯಾವುದೇ ರೀತಿಯ ಶೈಕ್ಷಣಿಕ ಅರ್ಹತೆಯ ಅವಶ್ಯಕತೆ ಇರುವುದಿಲ್ಲ. ಈ ಕಾರ್ಯಕ್ರಮದಡಿ ಸ್ವಸಹಾಯ ಗುಂಪಿನ ಮಹಿಳೆಯರಿಗೆ ಸಮುದಾಯ ಬಂಡವಾಳ ನಿಧಿ, ಸುತ್ತು ನಿಧಿ, ಬ್ಯಾಂಕ್ ಸಾಲ ಸೌಲಭ್ಯ, ಪಿಎಂಎಫ್‌ಎಂಇ ಯೋಜನೆಯಡಿ ಮೂಲ ಬಂಡವಾಳ ಸೌಲಭ್ಯ, ಕಿರು ಬಂಡವಾಳ ಉದ್ಯಮಗಳನ್ನು ಕೈಗೊಳ್ಳಲು ಸೂಕ್ತ ತರಬೇತಿ ಮತ್ತು ಲಿಂಕೇಜ್, ನರೇಗಾ ಯೋಜನೆ ಸೇರಿದಂತೆ ಇತರ ಇಲಾಖೆಗಳಾದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಕೃಷಿ, ತೋಟಗಾರಿಕೆ ಇತರ ಅವಶ್ಯಕ ಇಲಾಖೆಗಳೊಂದಿಗೆ ಒಗ್ಗೂಡಿಸುವಿಕೆ ಕಾರ್ಯಕ್ರಮದಡಿ ನಿರಂತರವಾಗಿ ಸೌಲಭ್ಯ ಒದಗಿಸಲಾಗುತ್ತಿದೆ. ರಾಜ್ಯದಲ್ಲಿ 29.48 ಲಕ್ಷ ಮಹಿಳೆಯರು ಯೋಜನೆಯ ನಿಯಮಾನುಸಾರ ಮತ್ತು ಅರ್ಹತೆಯ ಅನುಸಾರ ಸೌಲಭ್ಯಗಳನ್ನು ನಿರಂತರವಾಗಿ ಒದಗಿಸಲಾಗುತ್ತಿದೆ. |

| | |
|---|---|
| | • ಡಿಡಿಯು-ಜಿಕೆವೈ ಮತ್ತು ಆರ್‌ಸೆಟಿ ಯೋಜನೆಗಳಡಿ ಗ್ರಾಮಾಂತರ ಪ್ರದೇಶದಲ್ಲಿನ ನಿರುದ್ಯೋಗಿ ಯುವಕ/ಯುವತಿಯರಿಗೆ ವಿವಿಧ ವಿಷಯಗಳಡಿ ತರಬೇತಿಗಳನ್ನು ನೀಡಿ ಉದ್ಯೋಗ ಕಲ್ಪಿಸಲಾಗುತ್ತಿದೆ. ಡಿಡಿಯು-ಜಿಕೆವೈ ಕಾರ್ಯಕ್ರಮದಡಿ 17 ತರಬೇತಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, 25 ಟ್ರೇಡ್‌ಗಳಲ್ಲಿ ತರಬೇತಿ ಲಭ್ಯವಿದ್ದು, ಕನಿಷ್ಠ 8ನೇ ತರಗತಿ ವ್ಯಾಸಂಗ ಮಾಡಿದವರಿಗೂ ಟ್ರೇಡ್‌ಗಳ ಅನ್ವಯದಂತೆ ಪರಿಗಣಿಸಲಾಗುತ್ತಿದೆ. ಆರ್‌ಸೆಟಿ ಕಾರ್ಯಕ್ರಮದಡಿ ಓದು-ಬರಹ ಅರಿತಿರಬೇಕು. ರಾಜ್ಯದ 31 ಕೇಂದ್ರಗಳಲ್ಲಿ 64 ವಿವಿಧ ತರಬೇತಿಗಳು ಲಭ್ಯವಿರುತ್ತದೆ. ಈ ಯೋಜನೆಗಳಡಿ ತರಬೇತಿಯನ್ನು ಪಡೆಯಲಿಚ್ಛಿಸುವ ಆಸಕ್ತರಿಗೆ ಮತ್ತು ಕೌಶಲ್ಯವನ್ನು ಪಡೆದು ಜೀವನ ನಡೆಸಲು ಶಕ್ತರಾಗಿಸುವಲ್ಲಿ ಸರ್ಕಾರ ತರಬೇತಿಗೆ ಆಯ್ಕೆ ಮಾಡುವಾಗ ಸೂಕ್ತ ಸಮಾಲೋಚನೆ ಕೈಗೊಳ್ಳುವ ಮೂಲಕ ಫಲಾನುಭವಿಗಳ ಆದ್ಯತೆಗೆ ಅನುಗುಣವಾಗಿ ತರಬೇತಿಗಳಿಗೆ ಆಯ್ಕೆ ಮಾಡಿಕೊಳ್ಳಲಾಗುತ್ತಿದೆ. ಪ್ರತಿಯೊಂದು ತರಬೇತಿಗಳು ಉಚಿತವಾಗದ್ದು, ತರಬೇತಿಯ ಪಾಠ, ಪ್ರಾತ್ಯಕ್ಷಿತೆ, ಯೋಜನಾ ವರದಿ ತಯಾರಿಕೆ, ಕ್ಷೇತ್ರ ಭೇಟಿ ಮತ್ತು ಅನುಭವಿ ಕೌಶಲ್ಯ ವ್ಯಕ್ತಿ / ಉದ್ಯೋಗ ನಿರ್ವಹಿಸುತ್ತಿರುವವರೊಂದಿಗೆ ಸಂವಾದ ಕಾರ್ಯಕ್ರಮಗಳನ್ನು ಒಳಗೊಂಡಿರುತ್ತದೆ.<br>• ಜಿಲ್ಲೆಗಳಲ್ಲಿ ಉದ್ಯೋಗ ಮೇಳಗಳನ್ನು ಹಮ್ಮಿಕೊಳ್ಳುವ ಮೂಲಕ ಉದ್ಯೋಗ ಅವಕಾಶ ಕಲ್ಪಿಸಲಾಗುತ್ತಿದೆ.<br>• 2022-23ನೇ ವರ್ಷವನ್ನು ಸನ್ಮಾನ್ಯ ಮುಖ್ಯಮಂತ್ರಿಗಳು "ಜೀವನೋಪಾಯ ವರ್ಷ" ವೆಂದು ಆಯವ್ಯಯದಲ್ಲಿ ಘೋಷಿಸಿರುವಂತೆ 17 ಲಕ್ಷ ಉದ್ಯೋಗಗಳನ್ನು ಸೃಷ್ಟಿಸಲು ಕ್ರಮ ಕೈಗೊಳ್ಳಲಾಗಿದೆ. ಮುಂದುವರೆದು, ಸ್ವಸಹಾಯ ಗುಂಪಿನ ಮಹಿಳೆಯರು ಉತ್ಪಾದಿಸುವ ಉತ್ಪನ್ನಗಳಿಗೆ ಮಾರುಕಟ್ಟೆ ವ್ಯವಸ್ಥೆಗಾಗಿ ಮಾಸಿಕ ಸಂತೆ, ಸರಸ್ ಮೇಳ ಮತ್ತು ಆನ್‌ಲೈನ್ ಮಾರುಕಟ್ಟೆಗಳಾದ ಅಮೇಜಾನ್, ಕಲ್ಚರ್ ಸ್ಟ್ರೀಟ್ ಮತ್ತು ಮಿಶೋದಂತಹ ವೇದಿಕೆಗಳನ್ನು ಕಲ್ಪಿಸಿ ಮಾರಾಟಕ್ಕೆ ಉತ್ತೇಜನ ನೀಡಲಾಗುತ್ತಿದೆ.<br>• ಕನಿಷ್ಠ ಶಿಕ್ಷಣವನ್ನು ಪಡೆದ ಗ್ರಾಮಾಂತರ ಭಾಗದ ಫಲಾನುಭವಿಗಳ ಬೇಡಿಕೆಯಂತೆ ತರಬೇತಿಗಳನ್ನು ಒದಗಿಸಲಾಗುತ್ತಿದೆ. ಮುಂದುವರೆದು ವಿಶೇಷ ಕೌಶಲ್ಯಗಳು ಮತ್ತು ಹೆಚ್ಚಿನ ಬೇಡಿಕೆಗಳು ಕಂಡು ಬಂದ ಸಂದರ್ಭಗಳಲ್ಲಿ ಸರ್ಕಾರ ಆದ್ಯತೆ ಅನುಸಾರ ಕ್ರಮ ಕೈಗೊಳ್ಳಲಾಗುವುದು. |

**ಸಂಖ್ಯೆ: ಕೌಉಜೀಇ 26 ಕೌಗುಪ್ರ 2022**

(ಡಾ|| ಸಿ.ಎನ್. ಅಶ್ವಥ್‌ನಾರಾಯಣ)
**ಉನ್ನತ ಶಿಕ್ಷಣ, ಐಟಿ-ಬಿಟಿ ವಿಜ್ಞಾನ ಮತ್ತು**
**ತಂತ್ರಜ್ಞಾನ, ವಿದ್ಯುನ್ಮಾನ ಮತ್ತು**
**ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು**
**ಜೀವನೋಪಾಯ ಸಚಿವರು.**

## ಅನುಬಂಧ-1

ಕಳೆದ ಮೂರು ವರ್ಷಗಳಲ್ಲಿ ಯೋಜನೆಗಳ ಅನುಷ್ಠಾನಕ್ಕಾಗಿ ಮಂಜೂರಾದ ಮತ್ತು ವೆಚ್ಚವಾದ ವಿವರ ಈ ಕೆಳಕಂಡಂತಿದೆ.

(ರೂ ಲಕ್ಷಗಳಲ್ಲಿ)

| ಕ್ರ.ಸಂ | ಯೋಜನೆ | ಆರ್ಥಿಕ ವರ್ಷ | ವಾರ್ಷಿಕ ಕ್ರಿಯಾ ಯೋಜನೆಯಲ್ಲಿ ಅನುಮೋದಿತ ಮೊತ್ತ | ಬಿಡುಗಡೆಯಾದ ಅನುದಾನ | ವೆಚ್ಚದ ವಿವರ | ಷರಾ |
|---|---|---|---|---|---|---|
| 1 | ಎನ್‌ಆರ್‌ಎಲ್‌ಎಂ (60:40) | 2019-20 | 38590.32 | 22,559.46 | 20,032.62 | |
| | | 2020-21 | 40000.00 | 30,249.36 | 26,169.32 | |
| | | 2021-22 | 81447.94 | 49,054.36 | 39,674.95 | |
| 2 | ಎನ್‌ಆರ್‌ಇಟಿಪಿ (60:40) | 2019-20 | 1624.00 | 1,262.00 | | |
| | | 2020-21 | 1806.00 | 1,264.99 | | |
| | | 2021-22 | 1809.67 | | | |
| 3 | ಡಿಡಿಯು-ಜಿಕೆವೈ (60:40) | 2019-20 | 40240.35 | | 2,071.17 | ಆರಂಭಿಕ ಶಿಲ್ಕು ಅನುದಾನದಲ್ಲಿ ವೆಚ್ಚ ಭರಿಸಲಾಗಿದೆ |
| | | 2020-21 | | | 2,598.28 | |
| | | 2021-22 | | | 1,882.00 | |
| 4 | ಆರ್‌ಸೆಟಿ (100% ಕೇಂದ್ರದ ಪಾಲು) | 2019-20 | 2737.66 | 263.19 | 424.32 | 2015-16ರಿಂದ 2021-22ನೇ ಸಾಲಿನ ಅನುದಾನವು ಜೂನ್ 2022 ರಲ್ಲಿ ಕೇಂದ್ರ ಸರ್ಕಾರ ಅನುದಾನ ಬಿಡುಗಡೆ ಆದೇಶ ಹೊರಡಿಸಿದೆ. ಈ ಅನುದಾನವನ್ನು ಆರ್‌ಸೆಟಿ ಬಿಡುಗಡೆ ಗೊಳಿಸಲಾಗುತ್ತಿದೆ) (ಅಂತಿಮ ಹಂತದಲ್ಲಿದೆ) |
| | | 2020-21 | 2690.93 | 723.46 | 245.29 | |
| | | 2021-22 | 1382.93 (Revised) | - | 495.50 | |